## ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.

## ಸಿ.ಸಿ.ನಂ.418/2018

| | | | |
|---|---|---|---|
| ಸಾಕ್ಷಿದಾರರ ಹೆಸರು | ಬೀರೇಶ ಹರನಹಳ್ಳಿ | ಸಿಡಬ್ಲ್ಯೂ | 2 |
| ತಂದೆ ಹೆಸರು | ಚಿಕ್ಕಪ್ಪ | ಪಿಡಬ್ಲ್ಯೂ | 3 |
| ವಯಸ್ಸು | 41 ವರ್ಷ | | |
| ಉದ್ಯೋಗ | ವ್ಯಾಪಾರ | | |
| ವಾಸಸ್ಥಳ | ಹಿರೇಕೆರೂರ , ಹಾವೇರಿ | | |

**ದಿಃ 04.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.**

1). ನನಗೆ ಚಾ.ಸಾ-3 ಮತ್ತು 8 ರವರ ಪರಿಚಯ ಇರುವದಿಲ್ಲ. ಈ ಪರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇರುವದಿಲ್ಲ ಹಾಗೂ ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿರುವದಿಲ್ಲ. ಸಾಕ್ಷಿಗೆ ಆತನು ಸಹಿ ಮಾಡಿದಂತಹ ದಾಖಲಾತಿಯನ್ನು ತೋಸಲಾಗಿ ಸದರಿ ದಾಖಲಾತಿಯು ಘಟನಾ ಸ್ಥಳದ ಪಂಚನಾಮೆ ಮತ್ತು ಕಚ್ಚಾ ನಕಾಶೆಯಾಗಿದ್ದು, ಅವುಗಳನ್ನು ನಿ.ಪಿ-1 ಮತ್ತು 2 ಎಂದು ಗುರುತಿಸಲಾಯಿತು. ನಿ.ಪಿ-1 ಮತ್ತು 2 ದಾಖಾಲತಿಗಳಲ್ಲಿ ಸಾಕ್ಷಿಯು ಸಹಿ ಮಾಡಿದಂತಹ ಸಹಿಗಳನ್ನು ನಿ.ಪಿ-1(ಬಿ) ಮತ್ತು 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಎರಡು ಪೋಟೋಗಳನ್ನು ತೋರಿಸಲಾಗಿ ಅದರಲ್ಲಿ ತಾನು ಇರುವದಾಗಿ ಒಪ್ಪಿದದರಿಂದ ಅವುಗಳನ್ನು ನಿ.ಪಿ-3 ಮತ್ತು 4 ಎಂದು ಗುರುತಿಸಲಾಯಿತು. ನಿ.ಪಿ-3 ಮತ್ತು 4 ಪೋಟೋಗಳನ್ನು ಎಲ್ಲಿ ಮತ್ತು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ. ನಿ.ಪಿ-1 ಮತ್ತು 2 ದಾಖಲಾತಿಗಳಿಗೆ ನನ್ನ ಜೊತೆ ಯಾರು ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿರುವದಿಲ್ಲ. ನಿ.ಪಿ-1 ಮತ್ತು 2 ದಾಖಲಾತಿಗಳಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಹಿ.ಸ.ಸ.ಅಭಿಯೋಜಕರಿಂದ.**

2) ನ್ಯಾಯಾಲಯದ ಮುಂದೆ ಇರುವ 1ನೇ ಆರೋಪಿಯು ಪಿರ್ಯಾದಿ ಮತ್ತು ಚಾ.ಸಾ-8 ಇವರಿಗೆ ಜಮೀನನ್ನು ಕೊಡಿಸುತ್ತೇನೆ ಎಂದು ಭರವಸೆ ನೀಡಿ ಅವರಿಂದ ಹಣವನ್ನು ಸ್ವೀಕರಿಸಿದ ಸ್ಥಳದಲ್ಲಿ ಪೊಲೀಸರು ನನ್ನನ್ನು ನಿ.ಪಿ-1 ಘಟನಾ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ ಮತ್ತು ಅದೇ ರೀತಿ ಘಟನಾ ಸ್ಥಳದಲ್ಲಿ ಘಟನಾ ಸ್ಥಳದ ಪಂಚನಾಮೆಗೆ ಸಹಿ ಮಾಡಿದ್ದೇನೆ ಅಂದರೆ ಸರಿಯಲ್ಲ. ನಿ.ಪಿ-1 ಮತ್ತು 2 ದಾಖಲಾತಿಗಳನ್ನು ಜರುಗಿಸುವಾಗಿ ನನ್ನ ಜೊತೆ ಚಾ.ಸಾ-2 ಮತ್ತು 8 ರವರು ಹಾಜರಿದ್ದರು ಅಂದರೆ ನನಗೆ ಗೊತ್ತಿರುವದಿಲ್ಲ. ನನಗೆ ನಿ.ಪಿ-1 ರಿಂದ 4 ದಾಖಲಾತಿಗಳ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದ್ದರೂ ಸಹ ನಾನು ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.

ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು

ಹಾವೇರಿ.